ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ರಾಜ್ಯದ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿನ ಸಾರ್ವಜನಿಕ ದೂರುಗಳ ಬಗ್ಗೆ

ಶ್ರೀ ಪಿ. ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು) -

116 (1150) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ವಸತಿ ಯೋಜನೆ ಅಥವಾ ಅಪಾರ್ಟ್‌ಮೆಂಟ್ ಸಮುಚ್ಚಯದ ಪ್ರಗತಿಯ ಕುರಿತು ನಿಯಮಿತವಾಗಿ ಬಿಲ್ಡರ್‌ಗಳು ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (ರೇರಾ)ಕ್ಕೆ ಯೋಜನಾ ವರದಿ ನೀಡುತ್ತಿದ್ದಾರೆಯೇ; ನೀಡದಿದ್ದಲ್ಲಿ ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (ರೇರಾ)ದ ನಿಯಮಗಳನ್ನು ಪಾಲಿಸದ ಬಿಲ್ಡರ್‌ಗಳ ವಿರುದ್ಧ ಎಷ್ಟು ದೂರು ದಾಖಲಿಸಲ್ಪಟ್ಟಿವೆ; ಮತ್ತು ಎಷ್ಟು ಪ್ರಕರಣಗಳಲ್ಲಿ ಪ್ರಾಧಿಕಾರದ ವತಿಯಿಂದ ಬಿಲ್ಡರ್‌ಗಳಿಗೆ ದಂಡ ವಿಧಿಸಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (ರೇರಾ)ದ ವತಿಯಿಂದ ದೂರು ನೀಡಿರುವ ಮನೆ ಕೊಳ್ಳುವವರ (Home Buyers) ಪರವಾಗಿ ಆದೇಶವಾಗಿ ಬಿಲ್ಡರ್‌ಗಳಿಗೆ ದಂಡದ ರೂಪವಾಗಿ ಎಷ್ಟು ಪ್ರಕರಣಗಳಲ್ಲಿ ಆಸ್ತಿ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ ಮತ್ತು ಎಷ್ಟು ಪ್ರಕರಣಗಳು ಅಂತ್ಯಗೊಂಡಿವೆ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (ರೇರಾ)ದ ವತಿಯಿಂದ ದಂಡನೆಗೊಳಪಟ್ಟ ಬಿಲ್ಡರ್‌ಗಳ ವಿರುದ್ಧ ಕ್ರಮ ವಹಿಸಲು ಎಷ್ಟು ಜಿಲ್ಲೆಗಳ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಮೊಕದ್ದಮೆಗಳು ದಾಖಲಾಗಿರುತ್ತವೆ; ಎಷ್ಟು ಪ್ರಕರಣಗಳಲ್ಲಿ ಮನೆ ಕೊಳ್ಳುವವರ (Home Buyers) ಪರವಾಗಿ ಜಿಲ್ಲಾಧಿಕಾರಿಗಳ ಕಛೇರಿಯಿಂದ ನ್ಯಾಯ ಒದಗಿಸಿಕೊಡಲಾಗಿದೆ ಮತ್ತು ಎಷ್ಟು ಪ್ರಕರಣಗಳು ವಿಚಾರಣೆ ಹಂತದಲ್ಲಿದೆ; (ವಿವರ ನೀಡುವುದು)

(ಉ) ರಾಜ್ಯದ ಜಿಲ್ಲೆಗಳಲ್ಲಿರುವ ಜಿಲ್ಲಾಧಿಕಾರಿಗಳ ಕಛೇರಿಗಳಲ್ಲಿ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (ರೇರಾ)ದ ಪ್ರಕರಣಗಳು ಇತ್ಯರ್ಥವಾಗಲು ಸಾಕಷ್ಟು ಸಮಯ ತೆಗೆದುಕೊಳ್ಳುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು? (ವಿವರ ನೀಡುವುದು)